**<u>ದಿನಾಂಕ 09.09.2025 ರಂದು ಪಿ.ಡಬ್ಲ್ಯೂ-1 ರವರನ್ನು ಪುನಃ ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಪಾಟೀ ಸವಾಲುಃ 1, 2 ಮತ್ತು 5ನೇ ಪ್ರತಿವಾದಿಯರ ಪರ ಶ್ರೀ.ಎಸ್ ಪಿ ಪಿ ವಕೀಲರಿಂದಃ-</u>**

1. ನಾನು ವಿದ್ಯಾಭ್ಯಾಸ ಮಾಡಿರುವುದಿಲ್ಲ. ದಾವಾ ಜಮೀನು 3 ಎಕರೆ 20 ಗುಂಟೆ ಇದ್ದು, ಅದು ಕಲಹಳ್ಳಿ ಗ್ರಾಮದಲ್ಲಿ ಇರುತ್ತದೆ. ದಾವಾ ಸ್ವತ್ತು ನನ್ನ ಗಂಡನ ತಂದೆಯಾದ ರಾಮಪ್ಪ

ಇವರಿಗೆ ಬಂದಿರುತ್ತದೆ. ಆತ ಬಸವಣ್ಣ ದೇವಸ್ಥಾನದ ಪೂಜಾರಿ ಆಗಿದ್ದರಿಂದ ದಾವಾ ಸ್ವತ್ತು ಆತನಿಗೆ ಕೊಡಲಾಗಿರುತ್ತದೆ. ಸದರಿ ರಾಮಪ್ಪ ಇವರಿಗೆ ಮಕ್ಕಳು ಇರಲಿಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸದರಿ ರಾಮಪ್ಪ ನನ್ನ ಗಂಡನನ್ನು ದತ್ತಕಕ್ಕೆ ತೆಗೆದುಕೊಂಡಿದ್ದರು ಎಂದು ಸ್ವತಃ ನುಡಿಯುತ್ತಾರೆ. ಸದರಿ ರಾಮಪ್ಪ ನಿಮ್ಮ ಗಂಡನನ್ನು ದತ್ತಕಕ್ಕೆ ತೆಗೆದುಕೊಂಡಿದ್ದರು ಎಂದು ತೋರಿಸಲು ದಾಖಲೆ ಹಾಜರುಪಡಿಸಿರುತ್ತೀರಾ ? ಎಂದು ವಕೀಲರು ಪ್ರಶ್ನಿಸಿದಾಗ ಸಾಕ್ಷಿಯು ಫೋಟೋ ಹಾಜರುಪಡಿಸಿರುತ್ತೇನೆ ಎಂದು ನುಡಿಯುತ್ತಾರೆ. ಸದರಿ ಫೋಟೋ ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೀರಾ ? ಎಂದು ವಕೀಲರು ಪ್ರಶ್ನಿಸಿದಾಗ ಸಾಕ್ಷಿಯು ಇಲ್ಲಾ ಎಂದು ನುಡಿಯುತ್ತಾರೆ. ಸದರಿ ರಾಮಪ್ಪ ನನ್ನ ಗಂಡನನ್ನು ದತ್ತಕಕ್ಕೆ ತೆಗೆದುಕೊಂಡಿದ್ದರು ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತಿನ ಮೇಲೆ ನನ್ನ ಗಂಡನಿಗೆ ಮತ್ತು ನನಗೆ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿಗೆ ಸಂಬಂಧಿಸಿದ ದಾಖಲೆಗಳನ್ನು ನಾನು ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ನಾನು ಸದರಿ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮೊದಲಿನಿಂದಲೂ ದಾವಾ ಸ್ವತ್ತು ಪ್ರತಿವಾದಿಯರ ಹೆಸರಿನಲ್ಲಿದ್ದು, ನನಗೆ ಸದರಿ ಸ್ವತ್ತಿನ ಮೇಲೆ ಯಾವುದೇ ಹಕ್ಕು ಇರದೇ ಇದ್ದರೂ ಸಹಿತ, ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 1, 2 ಮತ್ತು 5ನೇ ಪ್ರತಿವಾದಿ ಹಾಗೂ ನಾನು ಪ್ರತ್ಯೇಕವಾಗಿ ವಾಸಿಸುತ್ತೇವೆ ಎಂದರೆ ಸರಿ. ನಾನು ಮತ್ತು ಸದರಿ ಪ್ರತಿವಾದಿಯರು ಕಳೆದ 30 ವರ್ಷಗಳಿಂದ ಪ್ರತ್ಯೇಕವಾಗಿ ವಾಸಿಸುತ್ತಿದ್ದೇವೆ. ದಾವಾ ಸ್ವತ್ತಿನ 1, 2 ಮತ್ತು 5ನೇ ಪ್ರತಿವಾದಿಯರು ಮಾತ್ರ ಸ್ವಾಧೀನತೆ ಹೊಂದಿರುತ್ತಾರೆ ಎಂದು ಸದರಿ ಪ್ರತಿವಾದಿಯರ ಪರ ವಕೀಲರು ಸೂಚಿಸಿದಾಗ ಸಾಕ್ಷಿಯು ನಾನೂ ಬಿತ್ತುತ್ತೇನೆ ಎಂದು ಸ್ವತಃ ನುಡಿಯುತ್ತಾರೆ. ನಾನು ಸಹ ದಾವಾ ಸ್ವತ್ತಿನಲ್ಲಿ ಬಿತ್ತುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ **6** ರಿಂದ **8**ನೇ ಪ್ರತಿವಾದಿಯರ ಪರ ಶ್ರೀ.ಪಿ ಜಿ ಪಿ ವಕೀಲರಿಂದಃ-</u>

(6 ರಿಂದ 8ನೇ ಪ್ರತಿವಾದಿಯರ ಪರ ವಕೀಲರು ಸಾಕ್ಷಿಯ ಪಾಟೀ ಸವಾಲಿಗಾಗಿ ಕಾಲಾವಕಾಶ ಕೋರುತ್ತಾರೆ. ಆದೇಶ ಪುಟಗಳನ್ನು ಪರಿಶೀಲಿಸಿ ನೋಡಲಾಗಿ, ಸದರಿ ಪ್ರತಿವಾದಿಯರು ತಮ್ಮ ಪ್ರತಿವಾದ ಪತ್ರ ಸಲ್ಲಿಸದೇ ಇರುವುದು ಕಂಡು ಬರುತ್ತದೆ. ಆದ್ದರಿಂದ ಸಾಕ್ಷಿಯ ಪಾಟೀ ಸವಾಲಿಗಾಗಿ

ಕಾಲಾವಕಾಶ ನೀಡಲು ಯಾವುದೇ ಸಕಾರಣಗಳು ಕಂಡು ಬರದೇ ಇರುವುದರಿಂದ, ಸದರಿ ವಕೀಲರ ಪ್ರಾರ್ಥನೆಯನ್ನು ತಿರಸ್ಕರಿಸಿ, ಸದರಿ ಪ್ರತಿವಾದಿಯರ ಪರ ಸಾಕ್ಷಿಯ ಪಾಟೀಸವಾಲನ್ನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.)

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಅದೆ.

RAJASHEKHAR Digitally signed by RAJASHEKHAR Date: 2025.09.09 18:25:23 +0530

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಮ್.ಎಫ್.ಸಿ. ಜಮಖಂಡಿ.